ಕರ್ನಾಟಕ ಸರ್ಕಾರ ನೆನಪೋಲೆ-1

**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು – 560001**

ಸಂಖ್ಯೆ: DPI-CPI0C1-2(PROM)/3/2022/E-877390 ದಿನಾಂಕ: 20-10-2022

**ರವರಿಗೆ,**

**"ಅತ್ಯಂತ ತುರ್ತು"**

ಅಪರ ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ
ಕಲಬುರಗಿ/ಧಾರವಾಡ

ಮಾನ್ಯರೆ,

**ವಿಷಯ:** ಗ್ರೂಪ್-"ಎ"ಕಿರಿಯ ಶ್ರೇಣಿ ಶಿಕ್ಷಣಾಧಿಕಾರಿ ಹಾಗೂ ತತ್ಸಮಾನ ವೃಂದಕ್ಕೆ ಸ್ಥಾನಪನ್ನ ಬಡ್ತಿ ನೀಡುವ ಬಗ್ಗೆ.

**ಉಲ್ಲೇಖ:** (1) ಈ ಕಚೇರಿ ಸಮ ಸಂಖ್ಯೆ ಪತ್ರ ದಿನಾಂಕ: 20-09-2022
(2) ಸರ್ಕಾರದ ಪತ್ರ ಸಂಖ್ಯೆ: ಇಪಿ 236 ಡಿಜಿಎಂ 2022, ದಿನಾಂಕ: 14-10-2022

************

ಸಾರ್ವಜನಿಕ ಶಿಕ್ಷಣ ಇಲಾಖೆಯ ಗ್ರೂಪ್-"ಬಿ" ವೃಂದದ ಪ್ರೌಢ ಶಾಲಾ ಮುಖ್ಯ ಶಿಕ್ಷಕರು ಮತ್ತು ತತ್ಸಮಾನ ವೃಂದದ ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳನ್ನು ಗ್ರೂಪ್- "ಎ" ಕಿರಿಯ ಶ್ರೇಣಿ ಶಿಕ್ಷಣಾಧಿಕಾರಿ/ತತ್ಸಮಾನ ವೃಂದಕ್ಕೆ ಸ್ಥಾನಪನ್ನ ಬಡ್ತಿ ನೀಡುವ ಸಂಬಂಧ ಅರ್ಹ ಅಧಿಕಾರಿಗಳ ಪಟ್ಟಿಯನ್ನು ಲಗತ್ತಿಸಿ ಪ್ರಸ್ತಾವನೆ ದಿನಾಂಕ: 08-10-2022ರೊಳಗೆ ಸಲ್ಲಿಸಲು ಉಲ್ಲೇಖ(1)ರ ಪತ್ರದಲ್ಲಿ ಸೂಚಿಸಲಾಗಿರುತ್ತದೆ. ಆದರೆ, ಈ ದಿನಾಂಕದವರೆಗೆ ಪ್ರಸ್ತಾವನೆಗಳು ಸಲ್ಲಿಸಿರುವುದಿಲ್ಲ.

ಉಲ್ಲೇಖ(2)ರ ಸರ್ಕಾರದ ಪತ್ರದಲ್ಲಿ ಗ್ರೂಪ್-"ಬಿ" ವೃಂದದ ಪ್ರೌಢ ಶಾಲಾ ಮುಖ್ಯ ಶಿಕ್ಷಕರು ಮತ್ತು ತತ್ಸಮಾನ ವೃಂದದ ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳನ್ನು ಗ್ರೂಪ್- "ಎ" ಕಿರಿಯ ಶ್ರೇಣಿ ಶಿಕ್ಷಣಾಧಿಕಾರಿ/ತತ್ಸಮಾನ ವೃಂದಕ್ಕೆ ಸ್ಥಾನಪನ್ನ ಬಡ್ತಿ ನೀಡುವ ಸಂಬಂಧದಿನಾಂಕ: 28-10-2022 ರಂದು ಇಲಾಖಾ ಮುಂಬಡ್ತಿ ಸಮಿತಿ ಸಭೆಯನ್ನು ನಿಗಧಿಪಡಿಸಲಾಗಿರುತ್ತದೆ.

ಆದ್ದರಿಂದ, ಗ್ರೂಪ್-"ಬಿ" ವೃಂದದ ಪ್ರೌಢ ಶಾಲಾ ಮುಖ್ಯ ಶಿಕ್ಷಕರು ಮತ್ತು ತತ್ಸಮಾನ ವೃಂದದ ಅಧಿಕಾರಿಗಳಿಗೆ ಗ್ರೂಪ್-ಎ ಕಿರಿಯ ಶ್ರೇಣಿ ಶಿಕ್ಷಣಾಧಿಕಾರಿ ಹಾಗೂ ತತ್ಸಮಾನ ವೃಂದಕ್ಕೆ ಸ್ಥಾನಪನ್ನ ಬಡ್ತಿ ನೀಡುವ ಕುರಿತು ತಮ್ಮ ಕಛೇರಿ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳ ಪ್ರಸ್ತಾವನೆಯನ್ನು ದಿನಾಂಕ: 21-10-2022ರ ಮಧ್ಯಾಹ್ನ 3:00 ಗಂಟೆಯೊಳಗೆ ಪೂರ್ಣದಾಖಲೆಯ ಮಾಹಿತಿಯನ್ನು ಸಲ್ಲಿಸುವುದು, ಹಾಗೇಯೇ ಪ್ರಸ್ತಾವನೆ ಸಲ್ಲಿಸದೇ ಇರುವ ಅಧಿಕಾರಿಗಳ ಪಟ್ಟಿಯನ್ನು ಪ್ರತ್ಯೇಕವಾಗಿ ದೃಢೀಕರಿಸಿ ಸಲ್ಲಿಸಲು ಸೂಚಿಸಿದೆ.

**"ಪ್ರಸ್ತಾವನೆ ಸಲ್ಲಿಸದೇ ಇದ್ದಲ್ಲಿ ಸಂಬಂಧಪಟ್ಟ ಅಧಿಕಾರಿಗಳೇ ಜವಾಬ್ದಾರರು"**

ತಮ್ಮ ನಂಬುಗೆಯ,

**ಡಾ. ರೂಪಶ್ರೀ. ಎಸ್., ಕ.ಆ.ಸೇ**
ಜಂಟಿ ನಿರ್ದೇಶಕರು (ಆಡಳಿತ)

**ಪ್ರತಿಗಳನ್ನು:-**

1. ಗೌರವಗಳೊಂದಿಗೆ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ,ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ರಾಜ್ಯದ ಎಲ್ಲಾ ನಿರ್ದೇಶಕರು/ ಸಹನಿರ್ದೇಶಕರು ಇವರಿಗೆ ಮುಂದಿನ ಅಗತ್ಯ ಕ್ರಮಕ್ಕಾಗಿ.
3. ಬೆಂಗಳೂರು ಮತ್ತು ಮೈಸೂರು ವಿಭಾಗದ ಎಲ್ಲಾ ಉಪನಿರ್ದೇಶಕರು (ಆಡಳಿತ)/ (ಅಭಿವೃದ್ಧಿ) ರವರಿಗೆ ಕಳುಹಿಸುತ್ತಾ, ತಮ್ಮ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಂಬಂಧಿಸಿದ ಅಧಿಕಾರಿಗಳಿಂದ "ತುರ್ತಾಗಿ" ಪಡೆದು ದೃಢೀಕರಿಸಿ ನಿಗಧಿ ಪಡಿಸಿದ್ದ ದಿನಾಂಕದೊಳಗೆ ಸಲ್ಲಿಸಲು ಕೋರಿದೆ.
4. ಕಿರಿಯ ಸಹಾಯಕ ನಿರ್ದೇಶಕರು, ಇ-ಆಡಳಿತ, ಸಾ.ಶಿ.ಇ, ಆಯುಕ್ತರ ಕಛೇರಿ, ಬೆಂಗಳೂರು ರವರಿಗೆ ಇಲಾಖಾ ವೆಬ್ ಸೈಟ್ ನಲ್ಲಿ ಅಪ್ ಲೋಡ್ ಮಾಡಲು ಕೋರಿದೆ.
5. ಸಂಬಂಧಿಸಿದ ಅಧಿಕಾರಿಗೆ